**"Azadi Ka Amrit Mahotsav"**
**INDIA@75**

**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು-560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

---

ದಿನಾಂಕ: 01-10.2021

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 02-10-2021 ರಿಂದ 06-10-2021 ವರೆಗೆ)

| ನಿಯತಾಂಕಗಳು | 02.10.2021 | 03.10.2021 | 04.10.2021 | 05.10.2021 | 06.10.2021 |
|---|---|---|---|---|---|
| ಮಳೆ (ಮಿ ಮಿ) | 15 | 14 | 9 | 17 | 16 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28 | 27 | 27 | 27 | 27 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19 | 19 | 19 | 20 | 20 |
| ಮೋಡ ( ಪ್ರಮಾಣ) | 4 | 4 | 4 | 4 | 5 |
| ಅರ್ದ್ರತೆ 7.20 ಬೆ (ಶೇ) | 79 | 79 | 79 | 81 | 81 |
| ಅರ್ದ್ರತೆ 2.20 ಮ (ಶೇ) | 65 | 65 | 65 | 67 | 67 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 2 | 2 | 2 | 2 |
| ಗಾಳಿಯ ದಿಕ್ಕು ( ಡಿಗ್ರಿ) | 154 | 135 | 150 | 68 | 154 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆ0ಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 27.0-29.0$^{o}$ C ಮತ್ತು ಕನಿಷ್ಠ 19.0-20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **79-81** % ಇದ್ದು ಮಧ್ಯಾಹ್ನ **65-67** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-3** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

**"ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ !"**

- ಹಸ್ತ ಮಳೆಯು ಕಾಲವು ಸೆಪ್ಟೆಂಬರ್ ತಿಂಗಳ 27 ರಿಂದ ಅಕ್ಟೋಬರ್ ತಿಂಗಳ 10 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 105.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯ ಮುನ್ಸೂಚನೆ ಇದೆ, ತದನಂತರ ದೀರ್ಘಾವಧಿ ಹವಾಮಾನ ಮುನ್ಸೂಚನೆಯ ಪ್ರಕಾರ ಸೆಪ್ಟೆಂಬರ್ ಎರಡನೇ ಮತ್ತು ಮೂರನೇ ವಾರದ ವರೆಗೂ ಸರಾಸರಿಗಿಂತ ಕಡಿಮೆ ಮಳೆಯ ಸಾಧ್ಯತೆ ಇರುವುದರಿಂದ ತಡ ಮುಂಗಾರು ಬಿತ್ತನೆಯನ್ನು ಮುಂದೂಡಿ.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ-ಹೊದಿಕೆಯಾಗಿ ಹರಡುವುದು<br>➢ ಜುಲೈ ತಿಂಗಳ ಎರಡನೇ ವಾರ ಮತ್ತು ಆಗಸ್ಟ್ ತಿಂಗಳ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ಇಳಿಜಾರಿಗೆ ಅಡ್ಡಲಾಗಿ ಉಳುಮೆಯನ್ನು ಮಾಡಿ ಇದರಿಂದ ಮಣ್ಣಿನ ಸವಕಳಿ ಕಡಿಮೆಯಾಗುತ್ತದೆ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br><br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ** |

| | |
|---|---|
| | ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳೆಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್.ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365, ಜಿ.ಪಿ.ಯು-26, 45 & 48 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.